ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಗೆ ವಕೀಲರನ್ನು ನೇಮಿಸುವ ಬಗ್ಗೆ

ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

364(454) ಮಾನ್ಯ ಗೃಹ ಮತ್ತು ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾನೂನು ಇಲಾಖೆಯ ಅಡಿಯಲ್ಲಿ ಸರ್ಕಾರಿ ಸ್ವಾಮ್ಯದಲ್ಲಿರುವ ಬೇರೆ ಬೇರೆ ಸಂಸ್ಥೆಗಳಿಗೆ ಸರ್ಕಾರ ವಕೀಲರನ್ನು ನೇಮಿಸುವ ಪ್ರಕ್ರಿಯೆಗೆ ಇರುವ ಮಾನದಂಡಗಳೇನು;

(ಆ) ಈ ಮಾನದಂಡಗಳಿಗೆ ಬದಲಾಗಿ ಅರ್ಹತಾ ಪರೀಕ್ಷೆ ಮುಖಾಂತರ ಮೇಲ್ಕಂಡ ಸಂಸ್ಥೆಗಳಿಗೆ ವಕೀಲರನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?